## ಕರ್ನಾಟಕ ಸರ್ಕಾರದ ನಡವಳಿಗಳು

## ಜಲ ಸಂಪನ್ಮೂಲ ಇಲಾಖೆ

ವಿಷಯ:– ಶಿವಮೊಗ್ಗ ಜಿಲ್ಲೆ, ಶಿಕಾರಿಪುರ ತಾಲ್ಲೂಕಿನ ಕಲ್ಲುವೊಡ್ಡುಹಳ್ಳ ಹೊಸಕೆರೆ ನಿರ್ಮಾಣ ಯೋಜನೆಯ ರೂ.125.17 ಕೋಟಿಗಳ ಪರಿಷ್ಕೃತ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

ಓದಲಾಗಿದೆ:– 1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ಬೆಂಗಳೂರು ಇವರ ಪತ್ರ ಸಂಖ್ಯೆ:ಕನೀನಿ/ ತಾಂತ್ರಿಕ/ ಕಲ್ಲುವೊಡ್ಡುಹಳ್ಳ /ಇತರೆ/2018–19/7444 ದಿನಾಂಕ:02.04.2019.

2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ಬೆಂಗಳೂರು ಇವರ ಪತ್ರ ಸಂಖ್ಯೆ: ಕನೀನಿ/ಆಡಳಿತಾತ್ಮಕ ಅನುಮೋದನೆ ಪ್ರಸ್ತಾವನೆಗಳು/2019–20/2194 ದಿನಾಂಕ:26.07.2019.

-----***-----

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರಗಳಲ್ಲಿ, ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ, ಬೆಂಗಳೂರು ಇವರು, ಶಿವಮೊಗ್ಗ ಜಿಲ್ಲೆ, ಶಿಕಾರಿಪುರ ತಾಲ್ಲೂಕಿನ ಕಲ್ಲುವೊಡ್ಡುಹಳ್ಳ ಹೊಸ ಕೆರೆ ನಿರ್ಮಾಣ ಮಾಡಿ ಸುಮಾರು 1950 ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸುವ ಯೋಜನೆಯ ರೂ.20.42 ಕೋಟಿಗಳಿಗೆ ಸರ್ಕಾರದ ಆದೇಶ ಸಂ:ಜಸಂಇ 122 ಎಂಎಂಬಿ 2004 ದಿನಾಂಕ:30.08.2006 ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ ಎಂದು ತಿಳಿಸುತ್ತಾ, ಯೋಜನೆಗೆ ಅವಶ್ಯವಾಗಿದ್ದ, ನೀರಿನ ಹಂಚಿಕೆಯಾಗದಿದ್ದ ಕಾರಣ, ಕಾಮಗಾರಿಯು ಅನುಷ್ಠಾನಗೊಂಡಿರುವುದಿಲ್ಲ ಎಂದು ತಿಳಿಸಿರುತ್ತಾರೆ. ಮುಂದುವರೆದು, ಪ್ರಸ್ತುತ ಸದರಿ ಯೋಜನೆಗೆ ಮಾಸ್ಟರ್ ಪ್ಲಾನ್ ಕಮಿಟಿಯಲ್ಲಿ 0.647 ಟಿಎಂಸಿ ನೀರಿನ ಹಂಚಿಕೆಯಾಗಿರುತ್ತದೆ. ಆದ್ದರಿಂದ,ಶಿವಮೊಗ್ಗ ಜಿಲ್ಲೆ, ಶಿಕಾರಿಪುರ ತಾಲ್ಲೂಕಿನ ಕಲ್ಲುವೊಡ್ಡುಹಳ್ಳ ಹೊಸ ಕೆರೆ ನಿರ್ಮಾಣದ ಯೋಜನೆಗೆ ಮಾಸ್ಟರ್ ಪ್ಲಾನ್ ಕಮಿಟಿಯಲ್ಲಿ 0.647 ಟಿಎಂಸಿ ನೀರಿನ ಹಂಚಿಕೆಯಾಗಿದ್ದು, ಕಲ್ಲುವೊಡ್ಡುಹಳ್ಳ ಹೊಸ ಕೆರೆ ನಿರ್ಮಾಣ ಮಾಡಿ ಸುಮಾರು 1950 ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸಲು ಉದ್ದೇಶಿಸಲಾಗಿದೆ. ಅದರಂತೆ, ದಿನಾಂಕ:06.12.2018 ರಂದು ಜರುಗಿದ ನಿಗಮದ 45ನೇ ಅಂದಾಜು ಪರಿಶೀಲನಾ ಸಮಿತಿಯ ಸಭೆಯಲ್ಲಿ ಹಾಗೂ ದಿನಾಂಕ:23.01.2019 ರಂದು ಜರುಗಿದ 48ನೇ ಅಂದಾಜು ಪರಿಶೀಲನಾ ಸಮಿತಿಯ ಸಭೆಯಲ್ಲಿ ಯೋಜನಾ ವರದಿಯನ್ನು ಮಂಡಿಸಲಾಗಿ ಸಮಿತಿಯು ಯೋಜನೆಗೆ ತೀರುವಳಿ ನೀಡಿ, ಮಂಡಳಿಯ ಅನುಮೋದನೆಗೆ ಶಿಫಾರಸ್ಸು ಮಾಡಿರುತ್ತದೆ. ಯೋಜನೆಯ ವಿವರವಾದ ಯೋಜನಾ ವರದಿಯನ್ನು, ದಿನಾಂಕ:07.03.2019 ರಂದು ಜರುಗಿದ ನಿಗಮದ ನಿರ್ದೇಶಕರ ಮಂಡಳಿಯ 87ನೇ ಸಭೆಯಲ್ಲಿ ಮಂಡಿಸಲಾಗಿದ್ದು, ಶಿವಮೊಗ್ಗ ಜಿಲ್ಲೆ, ಶಿಕಾರಿಪುರ ತಾಲ್ಲೂಕಿನ ಕಲ್ಲುವೊಡ್ಡುಹಳ್ಳ ಹೊಸ ಕೆರೆ ನಿರ್ಮಾಣ ಯೋಜನೆಯನ್ನು ಹೊಸ ಯೋಜನೆಯನ್ನಾಗಿ ಕೈಗೊಳ್ಳುವಂತೆ ಸೂಚಿಸಿ, 2018–19ರ ದರಪಟ್ಟಿಯ ಅನ್ವಯ ತಯಾರಿಸಲಾಗಿರುವ ರೂ.125.17 ಕೋಟಿಗಳ ಪರಿಷ್ಕೃತ ಯೋಜನಾ ವರದಿಗೆ ಮಂಡಳಿಯು ಅನುಮೋದನೆ ನೀಡಿ, ಆಡಳಿತಾತ್ಮಕ ಅನುಮೋದನೆ ನೀಡುವಂತೆ ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತದೆ. ಈ ಹಿನ್ನೆಲೆಯಲ್ಲಿ, 2018–19ರ ದರಪಟ್ಟಿ ಅನ್ವಯ ತಯಾರಿಸಲಾಗಿರುವ ರೂ.125.17 ಕೋಟಿಗಳ ಶಿವಮೊಗ್ಗ ಜಿಲ್ಲೆ, ಶಿಕಾರಿಪುರ ತಾಲ್ಲೂಕಿನ ಕಲ್ಲುವೊಡ್ಡುಹಳ್ಳ ಹೊಸ ಕೆರೆ ನಿರ್ಮಾಣ ಯೋಜನೆಯ ಪರಿಷ್ಕೃತ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ, ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ರವರು ಕೋರಿರುತ್ತಾರೆ.

...2

ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ, ಈ ಕೆಳಕಂಡಂತೆ ಆದೇಶಿಸಲಾಗಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಜಸಂಇ 16 ಎಂಎಂಬಿ 2019, ಬೆಂಗಳೂರು,</u>**
**ದಿನಾಂಕ:01.08.2019.**

ಶಿವಮೊಗ್ಗ ಜಿಲ್ಲೆ, ಶಿಕಾರಿಪುರ ತಾಲ್ಲೂಕಿನ ಕಲ್ಲುವೊಡ್ಡುಹಳ್ಳ ಹೊಸ ಕೆರೆ ನಿರ್ಮಾಣ ಯೋಜನೆಯ 2018-19ನೇ ಸಾಲಿನ ದರಪಟ್ಟಿಯನ್ವಯ ತಯಾರಿಸಲಾಗಿರುವ ರೂ.125.17 ಕೋಟಿಗಳ ಪರಿಷ್ಕೃತ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಈ ಆದೇಶವನ್ನು ಕರ್ನಾಟಕ ಸರ್ಕಾರದ (ವ್ಯವಹಾರಗಳ ನಿರ್ವಹಣೆ) ನಿಯಮಗಳು, 1977 ರ ಭಾಗ-I ರ ನಿಯಮ-17 ರ ಉಪ ನಿಯಮ (2)ರ ಪರಂತುಕದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಶ್ರೀಧರ ಎಸ್.ಆರ್)
ಸರ್ಕಾರದ ಅಧೀನ ಕಾರ್ಯದರ್ಶಿ(ತಾಂತ್ರಿಕ-1),
ಜಲ ಸಂಪನ್ಮೂಲ ಇಲಾಖೆ

<u>ಪ್ರತಿಯನ್ನು:</u>

1. ಪ್ರಧಾನ ಮಹಾಲೇಖಾಪಾಲರು, (ಸಾಮಾನ್ಯ ಮತ್ತು ಸಾಮಾಜಿಕ ವಲಯ, ಲೆಕ್ಕಪರಿಶೋಧನೆ), ಕರ್ನಾಟಕ ಹೊಸ ಕಟ್ಟಡ ಆಡಿಟ್ ಭವನ ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು 01.
2. ಪ್ರಧಾನ ಮಹಾಲೇಖಾಪಾಲರು, (ಆರ್ಥಿಕ ಮತ್ತು ರಾಜಸ್ವ ವಲಯ ಲೆಕ್ಕಪರಿಶೋಧನೆ), ಕರ್ನಾಟಕ ಹೊಸ ಕಟ್ಟಡ ಆಡಿಟ್ ಭವನ ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು 01.
3. ಪ್ರಧಾನ ಮಹಾಲೇಖಾಪಾಲರು, (ಲೆಕ್ಕಗಳು ಮತ್ತು ಹಕ್ಕುಸ್ವಾಮ್ಯ), ಕರ್ನಾಟಕ ಬೆಂಗಳೂರು 01.
4. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಪರ/ಉಪಕಾರ್ಯದರ್ಶಿಗಳು (ಸಚಿವ ಸಂಪುಟ) ಪ್ರಕರಣ ಸಂ:ಸಿ:457/2019 ದಿನಾಂಕ:01.08.2019.
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ಬೆಂಗಳೂರು.
6. ಮುಖ್ಯ ಇಂಜಿನಿಯರ್, ತುಂಗಾ ಮೇಲ್ದಂಡೆ ಯೋಜನಾ ವಲಯ ಶಿವಮೊಗ್ಗ.
7. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಜೋ.ಇ. ಆರ್ಥಿಕ ಕೋಶ) ವಿಧಾನ ಸೌಧ ಬೆಂಗಳೂರು.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.